**Akashvani : Bangalore**
**National Bulletin In Kannada**
**19.03.2024 / 19.35 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**19.03.2024 / 19.35 hrs**

**<><*<><>*><>**

<u>ಮುಖ್ಯಾಂಶಗಳು</u>

೧. ೨೦೨೪ರ ಸಾರ್ವತ್ರಿಕ ಲೋಕಸಭಾ ಚುನಾವಣೆ ಮೊದಲ ಹಂತಕ್ಕೆ ನಾಳೆ ಅಧಿಸೂಚನೆ

೨. ಪೌರತ್ವ ತಿದ್ದುಪಡಿ ಕಾಯ್ದೆ- ಸಿಎಎ ಜಾರಿಗೆ ತಡೆಯಾಜ್ಞೆ ನೀಡಲು ಸುಪ್ರಿಂಕೋರ್ಟ್ ನಕಾರ

೩. ಸಚಿವ ಪುಶುಪತಿ ಕುಮಾರ್ ಪರಸ್ ಕೇಂದ್ರ ಸಂಪುಟಕ್ಕೆ ರಾಜಿನಾಮೆ

೪. ಕೇರಳ ಹತ್ಯೆ ಪ್ರಕರಣ; ತಲೆಮರೆಸಿಕೊಂಡಿದ್ದ ನಿಷೇಧಿತ ಪಿಎಫ್ಐ ಸದಸ್ಯನ ಬಂಧನ

**<><*<><>*><>**

೨೦೨೪ರ ಸಾರ್ವತ್ರಿಕ ಲೋಕಸಭಾ ಚುನಾವಣೆಯ ಮೊದಲ ಹಂತಕ್ಕೆ ನಾಳೆ ಅಧಿಸೂಚನೆ ಪ್ರಕಟವಾಗಲಿದ್ದು, ಬಹುತೇಕ ಎರಡು ತಿಂಗಳಿಗೂ ಹೆಚ್ಚಿನ ಅವಧಿಯಲ್ಲಿ ನಡೆಯಲಿರುವ ಪ್ರಜಾಪ್ರಭುತ್ವ ಉತ್ಸವಕ್ಕೆ ದೇಶ ಸಜ್ಜಾಗುತ್ತಿದೆ. ಚುನಾವಣೆಗಳ ಸಂದರ್ಭದಲ್ಲಿ ಎದುರಾಗಬಹುದಾದ ಯಾವುದೇ ಸವಾಲಿನ ನಿರ್ವಹಣೆಗೆ ಸೂಕ್ತ ವ್ಯವಸ್ಥೆಗಳು ದೇಶಾದ್ಯಂತ ಕಾರ್ಯಾರಂಭ ಮಾಡಿವೆ. ಈಗಾಗಲೇ ವರದಿಯಾಗಿರುವಂತೆ ಈ ಬಾರಿ ಲೋಕಸಭೆ ಚುನಾವಣೆ ಒಟ್ಟು ೭ ಹಂತಗಳಲ್ಲಿ ನಡೆಯಲಿದ್ದು, ಜೂನ್ ೪ ರಂದು ಮತ ಎಣಿಕೆ ನಿಗದಿಯಾಗಿದೆ. ಏಪ್ರಿಲ್ ೧೯ ರಂದು ನಡೆಯುವ ಮೊದಲ ಹಂತದ ಚುನಾವಣೆಯಲ್ಲಿ ೧೭ ರಾಜ್ಯಗಳು ಮತ್ತು ನಾಲ್ಕು ಕೇಂದ್ರಾಡಳಿತ ಪ್ರದೇಶಗಳ ೧೦೨ ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ನಡೆಯುವುದು. ನಾಮಪತ್ರಗಳ ಸಲ್ಲಿಕೆಗೆ ಈ ತಿಂಗಳ ೨೭ ಕಡೆಯ ದಿನ. ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ ಹಾಗೂ ಪಾರದರ್ಶಕವಾಗಿ, ಯಾವುದೇ ಅಕ್ರಮಗಳಿಗೆ ಅವಕಾಶವಿಲ್ಲದಂತೆ ನಡೆಸಲಾಗುವುದು ಎಂದು ಕೇಂದ್ರ ಚುನಾವಣಾ ಆಯೋಗ ಭರವಸೆ ನೀಡಿದೆ. ಹಣಬಲ, ತೋಳ್ಬಲ, ಸುಳ್ಳು ಸುದ್ದಿ ಪ್ರಚಾರ ಮತ್ತು ಮಾದರಿ ನೀತಿ ಸಂಹಿತೆ ನಿಯಮಗಳ ಉಲ್ಲಂಘನೆ ಪ್ರಕರಣಗಳನ್ನು ಅತ್ಯಂತ ಕಟ್ಟುನಿಟ್ಟಾಗಿ ನಿರ್ವಹಿಸಲಾಗುವುದು. ದೇಶಾದ್ಯಂತ, ರಾಜ್ಯ ಮತ್ತು ಜಿಲ್ಲಾ ಗಡಿ ಪ್ರದೇಶಗಳಲ್ಲಿ ೨೪ ತಾಸು ಕಾರ್ಯ ನಿರ್ವಹಿಸುವ ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಲಾಗಿದ್ದು, ಮುಂಬರುವ ದಿನಗಳಲ್ಲಿ ಅಕ್ರಮಗಳ ಮೇಲೆ ನಿಗಾ ಇಡಲು ಡ್ರೋನ್ ವಿಮಾನಗಳನ್ನು ಬಳಸಲಾಗುವುದು ಎಂದು ಆಯೋಗ ತಿಳಿಸಿದೆ.

**<><*<><>*><>**

ಲೋಕಸಭೆ ಮತ್ತು ನಾಲ್ಕು ರಾಜ್ಯಗಳ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಕೇಂದ್ರ ಚುನಾವಣಾ ಆಯೋಗ ಚುನಾವಣಾ ಪ್ರಕ್ರಿಯೆಯಲ್ಲಿ ಸಾಕಷ್ಟು ಬದಲಾವಣೆಗಳನ್ನು ತಂದಿದೆ. ಕ್ರಿಮಿನಲ್ ಹಿನ್ನೆಲೆಯ ಅಭ್ಯರ್ಥಿಗಳು ಮತ್ತು ರಾಜಕೀಯ ಪಕ್ಷಗಳು ತಮ್ಮ ವೆಬ್ ಸೈಟ್‌ಗಳಲ್ಲಿ ಅಪರಾಧ ಹಿನ್ನೆಲೆ ಕುರಿತು ಮಾಹಿತಿ ಬಹಿರಂಗಪಡಿಸುವುದನ್ನು ಕಡ್ಡಾಯಗೊಳಿಸಲಾಗಿದೆ. ಉಮೇದುವಾರರು ಆನ್ ಲೈನ್ ಮಾದರಿಯಡಿ ನಾಮಪತ್ರ ಸಲ್ಲಿಸಲು ಹೆಚ್ಚುವರಿ ಆಯ್ಕೆಯನ್ನು ಈ ಬಾರಿ ಒದಗಿಸಲಾಗಿದೆ. ಇದಕ್ಕಾಗಿ ಮುಖ್ಯ ಚುನಾವಣಾಧಿಕಾರಿಗಳು ಮತ್ತು ಜಿಲ್ಲಾ ಚುನಾವಣಾಧಿಕಾರಿಗಳ ವೆಬ್ ಸೈಟ್ ಗಳಲ್ಲಿ ಆನ್ ಲೈನ್ ಮೂಲಕ ಸಲ್ಲಿಸುವ ನಾಮಪತ್ರದ ಅರ್ಜಿಗಳನ್ನು ಒದಗಿಸಿದೆ. ಯಾವುದೇ ಅಭ್ಯರ್ಥಿಯು ಅರ್ಜಿಯನ್ನು ಆನ್‌ಲೈನ್‌ನಲ್ಲಿ ಭರ್ತಿ ಮಾಡಬಹುದು ಮತ್ತು ಅದರ ಪ್ರಿಂಟ್ ತೆಗೆದು ಸಹಿ ಮಾಡಿದ ನಂತರ ಚುನಾವಣಾಧಿಕಾರಿಗಳ ಮುಂದೆ ಸಲ್ಲಿಸಬಹುದಾಗಿದೆ. ನಾಮಪತ್ರ ಸಲ್ಲಿಸುವವರು ಆನ್ ಲೈನ್ ಮೂಲಕ ಸೂಕ್ತ ವೇದಿಕೆಗಳಲ್ಲಿ ಠೇವಣಿ ಮೊತ್ತವನ್ನು ಪಾವತಿ ಮಾಡಬಹುದಾಗಿದೆ. ನಾಮಪತ್ರ ಸಲ್ಲಿಸುವಾಗ ಉಂಟಾಗುವ ಗಡಿಬಿಡಿ ವಾತಾವರಣ ತಪ್ಪಿಸಲು ನಾಮಪತ್ರ ಸಲ್ಲಿಕೆ, ಪರಿಶೀಲನೆ ಮತ್ತು ಚಿಹ್ನೆ ಹಂಚಿಕೆಗಾಗಿ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಸೂಕ್ತ ಸ್ಥಳಾವಕಾಶ ಕಲ್ಪಿಸಬೇಕು. ಅಭ್ಯರ್ಥಿಗಳು ಮುಂಚಿತವಾಗಿ ಸೂಕ್ತವಾದ ಸಮಯವನ್ನು ನಿಗದಿಪಡಿಸಿಕೊಳ್ಳಬೇಕು ಎಂದು ಹೇಳಿದೆ. ಸುಪ್ರೀಂ ಕೋರ್ಟ್ ಆದೇಶದಂತೆ ಅಭ್ಯರ್ಥಿ ತನ್ನ ನಾಮಪತ್ರದಲ್ಲಿ ಎಲ್ಲಾ ಕಾಲಂಗಳನ್ನು ಭರ್ತಿಮಾಡಬೇಕು ಎಂದು ಆಯೋಗ ನಿರ್ದೇಶನ ನೀಡಿದೆ. ಅಭ್ಯರ್ಥಿಗಳು ತನ್ನ ಸಂಗಾತಿ, ಅವಲಂಬಿತರು ಮತ್ತು ಹಿಂದೂ ಅವಿಭಜಿತ ಕುಟುಂಬದ ಸದಸ್ಯರು ಕಳೆದ ೫ ವರ್ಷಗಳಲ್ಲಿ ಸಲ್ಲಿಸಿದ ಆದಾಯ ತೆರಿಗೆ ರಿಟರ್ನ್‌ನಲ್ಲಿ ಘೋಷಿಸಲಾದ ಒಟ್ಟು

ಆದಾಯದ ವಿವರಗಳನ್ನು ದಾಖಲಿಸಬೇಕು. ಸ್ಥಿರ, ಚರ ಆಸ್ತಿ, ವಿದೇಶಗಳು ಒಳಗೊಂಡಂತೆ ಸಾಗರೋತ್ತರ ಘಟಕ, ಟ್ರಸ್ಟ್‌ಗಳು, ಮತ್ತಿತರ ವಿವರಗಳನ್ನು ಸಲ್ಲಿಸಬೇಕಾಗುತ್ತದೆ. ತಿದ್ದುಪಡಿಯಾದ ನಾಮಪತ್ರಗಳ ವಿವರಗಳು ಮತ್ತು ಇತರೆ ನಮೂನೆಗಳು ಆಯುಕ್ತರ ವೆಬ್ ಸೈಟ್ ಗಳಲ್ಲಿ eci.gov.in ಲಭ್ಯವಿದೆ.

<><*<><>*><>

ಪೌರತ್ವ ತಿದ್ದುಪಡಿ ಕಾಯ್ದೆ ಜಾರಿಗೆ ತಡೆಯಾಜ್ಞೆ ನೀಡಲು ಸುಪ್ರೀಂಕೋರ್ಟ್ ಇಂದು ನಿರಾಕರಿಸಿದೆ. ಕಾಯ್ದೆಗೆ ಸಂಬಂಧಿಸಿದಂತೆ ಕಳೆದ ವಾರ ಹೊರಡಿಸಲಾಗಿರುವ ನಿಯಮಾಳಿ ಪ್ರಶ್ನಿಸಿ ಸಲ್ಲಿಸಲಾಗಿರುವ, ೨೩೭ ಅರ್ಜಿಗಳಿಗೆ ಸಂಬಂಧಿಸಿದಂತೆ ಪ್ರತಿಕ್ರಿಯೆ ಸಲ್ಲಿಸಲು ಸರ್ವೋಚ್ಛ ನ್ಯಾಯಲಯ, ಕೇಂದ್ರ ಸರ್ಕಾರಕ್ಕೆ ಮೂರು ವಾರಗಳ ಸಮಯ ನಿಗದಿಪಡಿಸಿದೆ. ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್, ನ್ಯಾಯಮೂರ್ತಿ, ಜೆ.ಬಿ.ಪರ್ದಿವಾಲ ಹಾಗೂ ನ್ಯಾಯಮೂರ್ತಿ ಮನೋಜ್ ಮಿಶ್ರಾ ಅವರನ್ನೊಳಗೊಂಡ ಪೀಠ ಅರ್ಜಿಗಳ ವಿಚಾರಣೆ ನಡೆಸಿತು. ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್, ಪ್ರತಿಪಕ್ಷ ಕಾಂಗ್ರೆಸ್‌ನ ಜೈರಾಮ್ ರಮೇಶ್, ತೃಣಮೂಲ ಕಾಂಗ್ರೆಸ್‌ನ ಮಹುವಾ ಮೊಹಿತ್ರಾ ಅರ್ಜಿದಾರರಲ್ಲಿ ಸೇರಿದ್ದಾರೆ. ಪ್ರಕರಣದ ಮುಂದಿನ ವಿಚಾರಣೆಯನ್ನು ಸುಪ್ರೀಂಕೋರ್ಟ್, ಎಪ್ರಿಲ್ ೯ಕ್ಕೆ ನಿಗದಿಪಡಿಸಿದೆ.

<><*<><>*><>

೨೦೨೪ರ ಸಾರ್ವತ್ರಿಕ ಲೋಕಸಭಾ ಚುನಾವಣೆಗೆ ಪಕ್ಷದ ಪ್ರಣಾಳಿಕೆ ಕುರಿತು ಕಾಂಗ್ರೆಸ್ ಕಾರ್ಯಕಾರಿ ಸಮಿತಿ ನವದೆಹಲಿಯಲ್ಲಿಂದು ಚರ್ಚೆ ನಡೆಸಿತು. ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪಕ್ಷದ ಮಾಜಿ ಅಧ್ಯಕ್ಷರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಹಾಗೂ ಹಿರಿಯ ನಾಯಕರಾದ ಪ್ರಿಯಾಂಕ ಗಾಂಧಿ ವಾದ್ರಾ, ಪಿ.ಚಿದಂಬರಂ, ದಿಗ್ವಿಜಯ ಸಿಂಗ್, ಅಜಯ್ ಮಕೇನ್ ಹಾಗೂ ಕೆ.ಸಿ.ವೇಣುಗೋಪಾಲ್ ಕಾರ್ಯಕಾರಿಣಿ ಸಭೆಯಲ್ಲಿ ಪಾಲ್ಗೊಂಡಿದ್ದರು. ಸಭೆಯ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಕೆ.ಸಿ.ವೇಣುಗೋಪಾಲ್, ಪಕ್ಷದ ಪ್ರಣಾಳಿಕೆಗೆ ಅಂತಿಮ ಒಪ್ಪಿಗೆ ಸೂಚಿಸುವ ಅಧಿಕಾರವನ್ನು ಕಾರ್ಯಕಾರಣಿ, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ವಹಿಸಿತು ಎಂದು ವಿವರಿಸಿದರು.

<><*<><>*><>

ಕೇಂದ್ರ ಸಚಿವ ಹಾಗೂ ರಾಷ್ಟ್ರೀಯ ಲೋಕಜನಶಕ್ತಿ ಪಕ್ಷದ ಮುಖ್ಯಸ್ಥ ಪುಶುಪತಿ ಕುಮಾರ್ ಪರಸ್, ಇಂದು ಕೇಂದ್ರ ಸಂಪುಟಕ್ಕೆ ರಾಜಿನಾಮೆ ಸಲ್ಲಿಸಿದ್ದಾರೆ. ಬಿಹಾರ ಲೋಕಸಭಾ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟ ಸೀಟು ಹಂಚಿಕೆ ಒಪ್ಪಂದಲ್ಲಿ, ಪರಸ್ ಅವರ ಪಕ್ಷಕ್ಕೆ ಯಾವುದೇ ಸ್ಥಾನ ನೀಡದಿರುವ ಹಿನ್ನೆಲೆಯಲ್ಲಿ ಈ ಬೆಳವಣಿಗೆ ಕಂಡುಬಂದಿದೆ. ದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಪಶುಪತಿ ಪರಸ್, ತಮ್ಮ ಪಕ್ಷಕ್ಕೆ ಅನ್ಯಾಯವಾಗಿದೆ ಎಂದು ಆರೋಪಿಸಿರುವ ಅವರು, ತಮ್ಮ ಸಚಿವ ಸ್ಥಾನಕ್ಕೆ ರಾಜಿನಾಮೆ ಘೋಷಿಸಿದ್ದಾರೆ.

<><*<><>*><>

ಮಾನವ ಕಳ್ಳಸಾಗಣೆ ಪಿಡುಗನ್ನು ನಿಯಂತ್ರಿಸುವ ಉದ್ದೇಶದಿಂದ ರಾಷ್ಟ್ರೀಯ ಮಹಿಳಾ ಆಯೋಗ ಮತ್ತು ರೈಲ್ವೆ ರಕ್ಷಣಾ ಪಡೆ ನಡುವೆ ದೆಹಲಿಯಲ್ಲಿ ಒಪ್ಪಂದ ಪತ್ರಕ್ಕೆ ಸಹಿ ಹಾಕಲಾಗಿದೆ. ಈ ಸಂದರ್ಭದಲ್ಲಿ ಮಾತನಾಡಿದ ಎಂದು ರಾಷ್ಟ್ರೀಯ ಮಹಿಳಾ ಆಯೋಗದ ಅಧ್ಯಕ್ಷರಾದ ರೇಖಾಶರ್ಮ, ರೈಲು ನಿಲ್ದಾಣಗಳಲ್ಲಿ ಕಾರ್ಯನಿರ್ವಹಿಸುವ ರೈಲ್ವೆ ರಕ್ಷಣಾ ಪಡೆಯ ಸಿಬ್ಬಂದಿ, ಮಹಿಳೆಯರು ಮತ್ತು ಮಕ್ಕಳ ಮೇಲೆ ನಡೆಯುವ ಅಪರಾಧ ಪ್ರಕರಣಗಳನ್ನು ಹತ್ತಿಕ್ಕುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತಾರೆ ಎಂದರು. ಶೇಕಡಾ ೮೦ರಷ್ಟು ಮಾನವ ಕಳ್ಳ ಸಾಗಾಟ ಪ್ರಕರಣಗಳಲ್ಲಿ, ಮಹಿಳೆಯರು ಮತ್ತು ಬಾಲಕಿಯರೇ ಬಲಿಪಶುಗಳಾಗಿರುತ್ತಾರೆ ಎಂದು ಅವರು ವಿಷಾದ ವ್ಯಕ್ತಪಡಿಸಿದರು. ರೈಲ್ವೆ ರಕ್ಷಣಾ ಪಡೆ - ಆರ್‌ಪಿಎಫ್ ನ ಪ್ರಧಾನ ನಿರ್ದೇಶಕ ಮನೋಜ್ ಯಾದವ್ ಮಾತನಾಡಿ, ಮಹಿಳೆಯರಿಗೆ ಸುರಕ್ಷಿತ ಮತ್ತು ಸುಭದ್ರ ಪ್ರಯಾಣದ ಭರವಸೆ ನೀಡುವುದೇ, ಇಂದು ಆಗಿರುವ ಒಪ್ಪಂದದ ಪ್ರಮುಖ ಉದ್ದೇಶವಾಗಿದೆ ಎಂದರು. ಮಾನವ ಕಳ್ಳ ಸಾಗಾಟ ಸೇರಿದಂತೆ ಮಹಿಳೆಯರ ಮೇಲಿನ ಯಾವುದೇ ದೌರ್ಜನ್ಯಗಳಿಗೂ, ರೈಲ್ವೆ ಜಾಲದ ಬಳಕೆಗೆ ಅವಕಾಶವಾಗದಂತೆ ಆರ್‌ಪಿಎಫ್ ಕಟ್ಟೆಚ್ಚರ ವಹಿಸುತ್ತದೆ ಎಂದರು.

<><*<><>*><>

ಮಾನವ ಕಳ್ಳಸಾಗಣೆ ಪಿಡುಗನ್ನು ನಿಯಂತ್ರಿಸುವ ಉದ್ದೇಶದಿಂದ ರಾಷ್ಟ್ರೀಯ ಮಹಿಳಾ ಆಯೋಗ ಮತ್ತು ರೈಲ್ವೆ ರಕ್ಷಣಾ ಪಡೆ ನಡುವೆ ದೆಹಲಿಯಲ್ಲಿ ಒಪ್ಪಂದ ಪತ್ರಕ್ಕೆ ಸಹಿ ಹಾಕಲಾಗಿದೆ. ಈ ಸಂದರ್ಭದಲ್ಲಿ ಮಾತನಾಡಿದ ಎಂದು ರಾಷ್ಟ್ರೀಯ ಮಹಿಳಾ ಆಯೋಗದ ಅಧ್ಯಕ್ಷರಾದ ರೇಖಾಶರ್ಮ, ರೈಲು ನಿಲ್ದಾಣಗಳಲ್ಲಿ ಕಾರ್ಯನಿರ್ವಹಿಸುವ ರೈಲ್ವೆ ರಕ್ಷಣಾ ಪಡೆಯ ಸಿಬ್ಬಂದಿ, ಮಹಿಳೆಯರು ಮತ್ತು ಮಕ್ಕಳ ಮೇಲೆ ನಡೆಯುವ ಅಪರಾಧ ಪ್ರಕರಣಗಳನ್ನು ಹತ್ತಿಕ್ಕುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತಾರೆ

ಎಂದರು. ಶೇಕಡಾ ೭೦ರಷ್ಟು ಮಾನವ ಕಳ್ಳ ಸಾಗಾಟ ಪ್ರಕರಣಗಳಲ್ಲಿ, ಮಹಿಳೆಯರು ಮತ್ತು ಬಾಲಕಿಯರೇ ಬಲಿಪಶುಗಳಾಗಿರುತ್ತಾರೆ ಎಂದು ಅವರು ವಿಷಾದ ವ್ಯಕ್ತಪಡಿಸಿದರು. ರೈಲ್ವೆ ರಕ್ಷಣಾ ಪಡೆ - ಆರ್‌ಪಿಎಫ್ ನ ಪ್ರಧಾನ ನಿರ್ದೇಶಕ ಮನೋಜ್ ಯಾದವ್ ಮಾತನಾಡಿ, ಮಹಿಳೆಯರಿಗೆ ಸುರಕ್ಷಿತ ಮತ್ತು ಸುಭದ್ರ ಪ್ರಯಾಣದ ಭರವಸೆ ನೀಡುವುದೇ, ಇಂದು ಆಗಿರುವ ಒಪ್ಪಂದದ ಪ್ರಮುಖ ಉದ್ದೇಶವಾಗಿದೆ ಎಂದರು. ಮಾನವ ಕಳ್ಳ ಸಾಗಾಟ ಸೇರಿದಂತೆ ಮಹಿಳೆಯರ ಮೇಲಿನ ಯಾವುದೇ ದೌರ್ಜನ್ಯಗಳಿಗೂ, ರೈಲ್ವೆ ಜಾಲದ ಬಳಕೆಗೆ ಅವಕಾಶವಾಗದಂತೆ ಆರ್‌ಪಿಎಫ್ ಕಟ್ಟೆಚ್ಚರ ವಹಿಸುತ್ತದೆ ಎಂದರು.

<><*<><>*><>

ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದಂತೆ, ಆಮ್‌ಆದ್ಮಿ ಪಕ್ಷದ ಮುಖಂಡ ಮನೀಶ್ ಸಿಸೋಡಿಯಾ ಅವರ ನ್ಯಾಯಾಂಗ ಬಂಧನ ಅವಧಿಯನ್ನು ಏಪ್ರಿಲ್ ೬ ರವರೆಗೆ ದೆಹಲಿಯ ರೋಸ್ ಅವಿನ್ಯೂ ನ್ಯಾಯಾಲಯ ಇಂದು ವಿಸ್ತರಿಸಿದೆ. ಜಾರಿ ನಿರ್ದೇಶನಾಲಯ ದಾಖಲಿಸಿರುವ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ನ್ಯಾಯಾಲಯದ ಮುಂದೆ ಸಿಸೋಡಿಯಾ ಅವರನ್ನು ಹಾಜರುಪಡಿಸಿದ ನಂತರ ನ್ಯಾಯಾಲಯ ಈ ಆದೇಶ ಹೊರಡಿಸಿದೆ. ಇದಕ್ಕೂ ಮುನ್ನ ಈಗ ರದ್ದುಪಡಿಸಲಾಗಿರುವ ದೆಹಲಿ ಮದ್ಯ ಅಬಕಾರಿ ನೀತಿಗೆ ಸಂಬಂಧಿಸಿದಂತೆ, ಸಿಬಿಐ ದಾಖಲಿಸಿರುವ ಪ್ರಕರಣದಲ್ಲಿ ದೆಹಲಿಯ ಮಾಜಿ ಉಪ ಮುಖ್ಯಮಂತ್ರಿಯೂ ಆಗಿರುವ ಸಿಸೋಡಿಯಾ ಅವರ ನ್ಯಾಯಾಂಗ ಬಂಧನವನ್ನು ಮಾರ್ಚ್ ೨೨ರವರೆಗೆ ವಿಸ್ತರಿಸಿತು. ಜಾರಿ ನಿರ್ದೇಶನಾಲಯ ಸಲ್ಲಿಸಿರುವ ಆರೋಪ ಪಟ್ಟಿಯಲ್ಲಿ ಸಿಸೋಡಿಯಾ ಅವರನ್ನು ಪ್ರಕರಣದ ಪ್ರಮುಖ ಆರೋಪಿ ಎಂದು ಹೆಸರಿಸಲಾಗಿದೆ. ೨೦೨೨ರ ಫೆಬ್ರವರಿ ೨೮ ರಂದು ಸಿಸೋಡಿಯಾ ದೆಹಲಿ ಸಂಪುಟಕ್ಕೆ ರಾಜಿನಾಮೆ ನೀಡಿದ್ದರು.

<><*<><>*><>

ಇಸ್ರೇಲ್ ವೈಮಾನಿಕ ದಾಳಿಯಲ್ಲಿ ಹಮಾಸ್ ಉಪ ಸೇನಾ ಕಮಾಂಡರ್ ಮರ್ವಾನ್ ಇಸ್ಸಾ ಸಾವನ್ನಪ್ಪಿದ್ದಾರೆ ಎಂದು ಅಮೆರಿಕಾದ ರಾಷ್ಟ್ರೀಯ ಭದ್ರತಾ ಸಲಹೆಗಾರ ಜೇಕ್ ಸುಲ್ಲಿವಾನ್ ಹೇಳಿದ್ದಾರೆ. ಕಳೆದ ವಾರ ಸೆಂಟ್ರಲ್ ಗಾಜಾದ ನುಸಿರಾತ್ ನಿರಾಶ್ರಿತರ ಶಿಬಿರದ ಅಡಿಯಲ್ಲಿರುವ ಸುರಂಗ ಸಂಕೀರ್ಣದಲ್ಲಿ ನಡೆದ ಇಸ್ಸಾ ಸಾವನ್ನಪ್ಪಿದ್ದಾರೆ ಎಂದು ಇಸ್ರೇಲಿ ಮಾಧ್ಯಮ ಮೂಲಗಳು ವರದಿ ಮಾಡಿವೆ. ಈ ನಡುವೆ ಗಾಜಾವನ್ನು ನಿಯಂತ್ರಿಸುವ ಪ್ಯಾಲೇಸ್ತೇನಿಯನ್ ಗುಂಪು, ಇಸ್ಸಾ ಸಾವಿನ ವರದಿಗಳ ಬಗ್ಗೆ ಅಧಿಕೃತವಾಗಿ ಪ್ರತಿಕ್ರಿಯಿಸಿಲ್ಲ. ಅಕ್ಟೋಬರ್ ೭ ರಂದು ಯುದ್ಧ ಆರಂಭವಾದಾಗಿನಿಂದ ಹಮಾಸ್‌ನ ಅತ್ಯಂತ ಹಿರಿಯ ನಾಯಕನಾಗಿದ್ದ ಇಸ್ಸಾ, ಕಳೆದ ವರ್ಷ ಅಕ್ಟೋಬರ್‌ನಲ್ಲಿ ಇಸ್ರೇಲ್‌ನ ಮೇಲೆ ದಾಳಿ ಮಾಡುವ ನಿರ್ಧಾರಕ್ಕೆ ಆತ ನೇರವಾಗಿ ಸಂಬಂಧ ಹೊಂದಿದ್ದ ಎಂದು ಹೇಳಲಾಗುತ್ತಿದೆ. ಇಸ್ರೇಲ್‌ನ ಮೋಸ್ಟ್  ವಾಂಟೆಡ್ ವ್ಯಕ್ತಿಗಳಲ್ಲಿ ಒಬ್ಬ ಎಂದು ಪರಿಗಣಿಸಲಾಗಿತ್ತು.

<><*<><>*><>

ಇಂದು ಕೇಂದ್ರೀಯ ಮೀಸಲು ಪೊಲೀಸ್ ಪಡೆ - ಸಿಆರ್‌ಪಿಎಫ್‌ನ ಸಂಸ್ಥಾಪನಾ ದಿನ. ಕೇಂದ್ರ ಗೃಹ ಸಚಿವರು ಸಿಆರ್‌ಪಿಎಫ್ ಯೋಧರು ಮತ್ತು ಅವರ ಕುಟುಂಬದವರಿಗೆ ಶುಭಾಶಯ ಕೋರಿದ್ದಾರೆ. ಕಾಶ್ಮೀರದಲ್ಲಿ ಶಾಂತಿ ಸ್ಥಾಪನೆ, ಎಡಪಂಥೀಯ ಬಂಡುಕೋರರ ಹಾವಳಿ ನಿಯಂತ್ರಣ ಸೇರಿದಂತೆ ಹಲವು ಕಾರ್ಯಾಚರಣೆಗಳಲ್ಲಿ ಪಾಲ್ಗೊಳ್ಳುವ ಮೂಲಕ ಈ ಪಡೆ ರಾಷ್ಟ್ರ ಸೇವೆಯಲ್ಲಿ ತೊಡಗಿಸಿಕೊಂಡಿದೆ.

<><*<><>*><>

ದೇಶದಲ್ಲಿ ಸಾರ್ವತ್ರಿಕ ಲೋಕಸಭಾ ಚುನಾವಣೆಗಳು ಆರಂಭಗೊಳ್ಳಲು ಕೆಲವೇ ದಿನಗಳು ಬಾಕಿ ಉಳಿದಿರುವಾಗ, ಅಮೆರಿಕಾದ ಮಾಜಿ ಭಾರತ ರಾಯಭಾರಿ ತರಣ್‌ಜಿತ್ ಸಿಂಗ್ ಸಂಧು ಅವರು, ಇಂದು ಬಿಜೆಪಿ ಸೇರ್ಪಡೆಗೊಂಡಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಿಗ್ಗೆ ೭.೦೫ಕ್ಕೆ <>*><>P**